ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 56 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶನಿವಾರ ದಿನಾಂಕ : 05-09-2026 ಪುಟ : 04 ಬೆಲೆ : 2-00

# ರೈತರ ಸಾಲಮನ್ನಾಗೆ ಕೇಂದ್ರದ ನೆರವು ಕೋರಿದ ಡಿಕೆಶಿ



ಬೆಂಗಳೂರು: ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ ರೈತರ ಕೃಷಿ ಸಾಲ ಮನ್ನಾ ಮಾಡಲು ಕೇಂದ್ರ ಸರ್ಕಾರ ನೆರವು ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗ್ರಹಿಸಿದ್ದಾರೆ.

ಬಾಗಲಕೋಟೆ ಮತ್ತು ವಿಜಯನಗರ ಜಿಲ್ಲೆಗಳ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ಸಾಲಮನ್ನಾ ವಿಚಾರವಾಗಿ ಕೇಂದ್ರದ ಮೇಲೆ ಒತ್ತಡ ಹೇರಲು ಬಿಜೆಪಿ ನಾಯಕರೂ ತಮ್ಮೊಂದಿಗೆ ದೆಹಲಿಗೆ ಬರಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಇತ್ತೀಚೆಗೆ ಮುಕ್ತಾಯಗೊಂಡ ವಿಧಾನಮಂಡಲದ ಮುಂಗಾರು ಅಧಿವೇಶನದಲ್ಲಿ ರೈತರ ಸಮಸ್ಯೆ ಹಾಗೂ ಬರ ಪರಿಸ್ಥಿತಿ ಕುರಿತು ಚರ್ಚೆ ನಡೆದಿಲ್ಲ ಎಂದು ಹೇಳಿದರು.

"ನೀವು ಬಿಜೆಪಿ ಮತ್ತು ಜೆಡಿಎಸ್‌ನ ರಾಜಕೀಯವನ್ನು ನೋಡಿದ್ದೀರಿ. ಇತ್ತೀಚಿನ ಅಧಿವೇಶನದಲ್ಲಿ ರೈತರ ಬಗ್ಗೆ ಅಥವಾ ಬರ ಪರಿಸ್ಥಿತಿಯ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಅದಕ್ಕಾಗಿಯೇ ವಿಶೇಷ ಅಧಿವೇಶನ ಕರೆಯಲಾಗಿದೆ" ಎಂದು ಅವರು ಹೇಳಿದರು.

ಬರ ಪರಿಸ್ಥಿತಿ ಕುರಿತು ಚರ್ಚಿಸಲು ಅವಕಾಶ ಸಿಗದಿರುವ ಬಗ್ಗೆ ಬಿಜೆಪಿ ಮತ್ತು ಜೆಡಿಎಸ್ ಶಾಸಕರೇ ಅಸಮಾಧಾನ ವ್ಯಕ್ತಪಡಿಸಿದ್ದರು. ಆಡಳಿತಾರೂಢ ಕಾಂಗ್ರೆಸ್ ಶಾಸಕರೂ ಇದೇ ರೀತಿಯ ಅಭಿಪ್ರಾಯ ವ್ಯಕ್ತಪಡಿಸಿದ್ದರು ಎಂದು ಶಿವಕುಮಾರ್ ತಿಳಿಸಿದರು.

2ನೇ ಪುಟಕ್ಕೆ...

## ತಮಿಳುನಾಡಿಗೆ ನಿರಂತರ ನೀರು 3 ಅಡಿ ಕುಸಿದ ಕೆಆರ್‌ಎಸ್ ಡ್ಯಾಮ್ ನೀರಿನ ಮಟ್ಟ




ಮಂಡ್ಯ: ಹಳೆ ಮೈಸೂರು ಭಾಗದ ಜೀವನಾಡಿ ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ ನಿರಂತರವಾಗಿ ನೀರು ಹರಿಸಲಾಗುತ್ತಿದೆ. ಇದ-ರಿಂದ ಕಾವೇರಿ ಕೊಳ್ಳದ ಜಲಾಶಯಗಳು ವೇಗವಾಗಿ ಬರಿದಾಗುತ್ತಿವೆ.

ಮಳೆ ಸಂಪೂರ್ಣ ಕೈಕೊಟ್ಟಿರುವ ನಡುವೆಯೂ ಹೊರಹರಿವು ದಿನೇ ದಿನೆ ಏರಿಕೆಯಾಗುತ್ತಿರುವುದು ಈ ಭಾಗದ ರೈತರು ಹಾಗೂ ಸಾರ್ವಜನಿಕರಲ್ಲಿ ತೀವ್ರ ಆತಂಕ ಮೂಡಿಸಿದೆ. ಕಬಿನಿ ಜಲಾಶಯದಲ್ಲಿ ನೀರಿನ ಮಟ್ಟ ಗಣನೀಯವಾಗಿ ಕುಸಿದಿರುವ ಹಿನ್ನೆಲೆಯಲ್ಲಿ, ತಮಿಳುನಾಡಿಗೆ ಹರಿಸಬೇಕಾದ ಬಹುಪಾಲು ನೀರನ್ನು

2ನೇ ಪುಟಕ್ಕೆ...

## ಉಗ್ರನ ಹತ್ಯೆ; ಎಕೆ ರೈಫಲ್ ಮತ್ತಿತರ ಶಸ್ತ್ರಾಸ್ತ್ರಗಳು ವಶ!



ಬುಡ್ಗಾಮ್: ಜಮ್ಮು ಮತ್ತು ಕಾಶ್ಮೀರದ ಬುಡ್ಗಾಮ್ ಜಿಲ್ಲೆಯ ಅಶ್ದಾರ್ ಗಲಿ ಅರಣ್ಯ ಪ್ರದೇಶದಲ್ಲಿ ಶುಕ್ರವಾರ ನಡೆದ ಭದ್ರತಾ ಪಡೆಗಳ ಜಂಟಿ ಕಾರ್ಯಾಚರಣೆಯಲ್ಲಿ ಒಬ್ಬ ಉಗ್ರನನ್ನು ಹತ್ಯೆ ಮಾಡಲಾಗಿದೆ. ಇದೇ ಪ್ರದೇಶದಲ್ಲಿ ಇನ್ನಿಬ್ಬರು ಉಗ್ರರು ಇರಬಹುದು ಎಂದು ಶಂಕಿಸಲಾಗಿದ್ದು, ಶೋಧ ಕಾರ್ಯಾಚರಣೆ ಮುಂದುವರಿದಿದೆ. ದಕ್ಷಿಣ ಕಾಶ್ಮೀರದ ಪುಲ್ವಾಮಾ ಜಿಲ್ಲೆ ಮತ್ತು ಜಮ್ಮು ವಲಯದ ಪೂಂಚ್ ಜಿಲ್ಲೆಯ ಗಡಿಗಳ

2ನೇ ಪುಟಕ್ಕೆ...

## ಹಗರಣದ ಹಣದಲ್ಲಿ 5 ಕೋಟಿ ಮೌಲ್ಯದ ಕೃಷಿ ಭೂಮಿ ಖರೀದಿಸಿದ್ದ ಕನ್ನಾಳೆ

ಬೀದರ್: ಕೆಪಿಎಸ್‌ಸಿ ಪಶುವೈದ್ಯಕೀಯ ನೇಮಕಾತಿ ಹಗರಣ ಕೇಸಲ್ಲಿ ಕಿಂಗ್‌ಪಿನ್ ಬಸವರಾಜ್ ಕನ್ನಾಳೆ ಕರ್ಮಕಾಂಡ ಬಗೆದಷ್ಟೂ ಬಯಲಾಗುತ್ತಿದೆ.

ಕೆಪಿಎಸ್‌ಸಿ ಹಗರಣದಲ್ಲಿ ಬಂದ ಕೋಟಿ ಕೋಟಿ ಹಣದಿಂದಲೇ ಕನ್ನಾಳೆ ಕೃಷಿ ಭೂಮಿ ಖರೀದಿ ಮಾಡಿದ್ದ ಅನ್ನೋ ಮಾಹಿತಿ ಲಭ್ಯವಾಗಿದೆ.

ಹೌದು. ಕನ್ನಾಳೆ ಒಂದು ವರ್ಷದ ಹಿಂದೆ-ಯೇ ಸುಮಾರು 5 ಕೋಟಿ ಮೌಲ್ಯದ 20 ಕೃಷಿ ಭೂಮಿ ಖರೀದಿ ಮಾಡಿದ್ದ ಎಂದು ತನಿಖಾ ಮೂಲಗಳು ಬಹಿರಂಗಪಡಿಸಿವೆ.

## ಶ್ರೇಷ್ಠತೆ, ಸಾಮರ್ಥ್ಯದ ಪ್ರತಿಬಿಂಬ ಇಸ್ರೋದ GSLV-F17 ಯಶಸ್ಸಿಗೆ ಮೋದಿ ಶ್ಲಾಘನೆ



ಅಮರಾವತಿ: 7 ತಿಂಗಳ ವಿರಾಮದ ಬಳಿಕ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಅಭೂತಪೂರ್ವ ಸಾಧನೆ ಮಾಡಿದೆ. ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಭೂ ವೀಕ್ಷಣಾ ಉಪಗ್ರಹ EOS-05 ಅನ್ನು ಹೊತ್ತ GSLV-F17 ರಾಕೆಟ್ ಶುಕ್ರವಾರ ನಸುಕಿನ ಜಾವ 2:55ರ ಸುಮಾರಿಗೆ ಬಾಹ್ಯಾಕಾಶ ನಿಲ್ದಾಣದಿಂದ

2ನೇ ಪುಟಕ್ಕೆ...

## ಕೋಲ್ಕತ್ತ ವೈದ್ಯೆಯ ಅತ್ಯಾಚಾರ-ಕೊಲೆ

ಕೋಲ್ಕತ್ತ (ಪಿಟಿಐ): ಇಲ್ಲಿನ ಆರ್‌ಜಿ ಕರ್ ಆಸ್ಪತ್ರೆಯಲ್ಲಿ ನಡೆದಿದ್ದ ಅತ್ಯಾಚಾರ ಮತ್ತು ಕೊಲೆ ಸಂತ್ರಸ್ತೆಯ ಅಂತಿಮ ಸಂಸ್ಕಾರವನ್ನು ತರಾತುರಿಯಲ್ಲಿ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ, ಟಿಎಂಸಿ ನಾಯಕ ಸೋಮನಾಥ್ ಡೇ ಅವರನ್ನು ಬೆಂಗಳೂರಿನಲ್ಲಿ ಬಂಧಿಸಲಾಗಿದೆ.

ಪಾನೀಹಾಟಿ ಸ್ಥಳೀಯ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಡೇ, ತನಿಖೆ ಶುರುವಾದಾಗಿನಿಂದ ತಲೆಮರೆಸಿಕೊಂಡಿದ್ದರು.

## ನಾಲ್ಕನೇ ದಿನಕ್ಕೆ ಕಾಲಿಟ್ಟ ಬಳ್ಳಾರಿ ಚಲೋ

### ರಾಯಚೂರಿನಿಂದ ಕೊಪ್ಪಳ ಜಿಲ್ಲೆಗೆ ಪಾದಯಾತ್ರೆ ಪ್ರವೇಶ



ರಾಯಚೂರು: ಕಾಂಗ್ರೆಸ್ ಸರ್ಕಾರದ ವೈಫಲ್ಯ ಖಂಡಿಸಿ ಹಮ್ಮಿಕೊಂಡಿರುವ ಬಿಜೆಪಿಯ ಬಳ್ಳಾರಿ ಚಲೋ ಪಾದಯಾತ್ರೆ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಇಂದು ರಾಯಚೂರಿನ ಸಿಂಧನೂರು ನಗರದಿಂದ ಕೊಪ್ಪಳದ ಕಾರಟಗಿ ವರೆಗೆ 26 ಕಿ.ಮೀ ಪಾದಯಾತ್ರೆ ನಡೆಯಲಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ನೇತೃತ್ವದಲ್ಲಿ ಬಿಜೆಪಿ ನಾಯಕರಾದ ಗೋವಿಂದ ಕಾರಜೋಳ, ಬಿ.ಶ್ರೀರಾಮುಲು, ಸುನಿಲ್ ಕುಮಾರ್, ಮಹೇಶ ತೆಂಗಿನಕಾಯಿ ಸೇರಿದಂತೆ ಹಲವರು ಭಾಗಿಯಾಗಿದ್ದಾರೆ. ಸಿಂಧನೂರಿನ ಮಹಾತ್ಮ ಗಾಂಧಿ ವೃತ್ತದಿಂದ ಪಾದಯಾತ್ರೆ ಆರಂಭವಾಗಿದ್ದು, ಕೃಷ್ಣ ಜನ್ಮಾಷ್ಟಮಿಯ ಪ್ರಯುಕ್ತ ಗೋಪೂಜೆ ಮಾಡುವ ಮೂಲಕ ಪಾದಯಾತ್ರೆ ಪ್ರಾರಂಬಿಸಲಾಯಿತು. ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಉಸ್ತುವಾರಿಯಲ್ಲಿ

2ನೇ ಪುಟಕ್ಕೆ..

## ಮಳೆ ಕೊರತೆ, ಬರದ ಆತಂಕ;

### 28.52 ಕೋಟಿ ರೂ. ವೆಚ್ಚದಲ್ಲಿ ಮೋಡ ಬಿತ್ತನೆಗೆ ಸರ್ಕಾರ ಚಾಲನೆ



ಬೆಂಗಳೂರು: ರಾಜ್ಯದಲ್ಲಿ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಕೈಗೊಂಡಿರುವ ಮಹತ್ವಾಕಾಂಕ್ಷಿ ಮೋಡ ಬಿತ್ತನೆ ಯೋಜನೆಗೆ ಶುಕ್ರವಾರ ಅಧಿಕೃತ ಚಾಲನೆ ನೀಡಲಾಗಿದೆ. ಬೆಂಗಳೂರಿನ ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಮೋಡ ಬಿತ್ತನೆ ಕಾರ್ಯಾಚರಣೆಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮೋಡ ಬಿತ್ತನೆಗಾಗಿ ವಿಶೇಷವಾಗಿ ಸಿದ್ಧಪಡಿಸಲಾಗಿರುವ ಲಘು ವಿಮಾನಕ್ಕೆ ರಾಷ್ಟ್ರಧ್ವಜ

2ನೇ ಪುಟಕ್ಕೆ...

## ಕೂಡಲಸಂಗಮದಲ್ಲಿ ಡಿಕೆಶಿ ವಿಶೇಷ ಪೂಜೆ

### ತ್ರಿವೇಣಿ ಸಂಗಮಕ್ಕೆ ಬಾಗಿನ ಅರ್ಪಣೆ



ಬಾಗಲಕೋಟೆ: ಜಿಲ್ಲೆಯ ಹುನಗುಂದ ತಾಲೂಕಿನಲ್ಲಿರುವ ಕೂಡಲಸಂಗಮದ ಸಂಗಮನಾಥ ದೇವಸ್ಥಾನಕ್ಕೆ ಸಿಎಂ ಡಿಕೆ ಶಿವಕುಮಾರ್ ಅವರು ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದ್ದಾರೆ.

## ಕೆರೆ ಒತ್ತುವರಿ ಮಾಡಿದರೆ ಕ್ರಿಮಿನಲ್ ಕೇಸ್: ಖಂಡ್ರೆ



ಬೆಂಗಳೂರು: ಗ್ರಾಮ ಪಂಚಾಯತಿಗೆ ಸೇರಿದ ಮತ್ತು ನಿರ್ವಹಿಸುತ್ತಿರುವ ಯಾವುದೇ ಕೆರೆಯನ್ನು ಒತ್ತುವರಿ ಮಾಡಿದ್ದರೆ ನಿರ್ದಾಕ್ಷಿಣ್ಯವಾಗಿ ತೆರವು ಮಾಡಿಸಲಾಗುವುದು ಮತ್ತು ಒತ್ತುವರಿದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ಎಚ್ಚರಿಕೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು (ಸೆ.4) ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ದೇಶದಲ್ಲೇ 2ನೇ ಅತಿ ಹೆಚ್ಚು ಬರಡು ಭೂಮಿ ಇರುವ ರಾಜ್ಯವಾಗಿದ್ದು, ಗ್ರಾಮೀಣ ಪ್ರದೇಶಕ್ಕೆ ಕುಡಿಯುವ ನೀರು ಪೂರೈಕೆ ದೊಡ್ಡ ಸವಾಲಾಗಿದೆ. ರಾಜ್ಯದ ಗ್ರಾ.ಪಂ. ವ್ಯಾಪ್ತಿಯಲ್ಲಿ 32,504 ಕೆರೆಗಳಿದ್ದು 11,498 ಕೆರೆ ಒತ್ತುವರಿ ಆಗಿತ್ತು. 2ನೇ ಪುಟಕ್ಕೆ..

## ಬಳ್ಳಾರಿಯಲ್ಲಿ ಸಂಭ್ರಮದ ಶ್ರೀ ಕೃಷ್ಣ ಜಯಂತ್ಯೋತ್ಸವ

### ಗೊಲ್ಲರ ಸಂಘದ ಸಮುದಾಯ ಭವನ ನಿರ್ಮಾಣಕ್ಕೆ ರೂ.25 ಲಕ್ಷ ಅನುದಾನ: ಶಾಸಕ ಭರತ್ ರೆಡ್ಡಿ




ಬಳ್ಳಾರಿ: ನಗರದ ಗೊಲ್ಲರ ಸಂಘದ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಿಂದ ರೂ.25 ಲಕ್ಷ ಅನುದಾನ ನೀಡಲಾಗುವುದು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಗರದ ವಾಲ್ಮೀಕಿ ವೃತ್ತದ ಲೋಕಾರ್ಪಣೆ

2ನೇ ಪುಟಕ್ಕೆ...

## ವಿದ್ಯುತ್ ಬೇಡಿಕೆ ನೀಗಿಸಲು ಮಹತ್ವದ ಯೋಜನೆ; 2030ರ ವೇಳೆಗೆ 66 ಗಿಗಾವ್ಯಾಟ್ ಗುರಿ;



ಬೆಂಗಳೂರು: ರಾಜ್ಯ ಸರ್ಕಾರವು 2030ರ ವೇಳೆಗೆ ರಾಜ್ಯದ ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ಪ್ರಸ್ತುತ 39 ಗಿಗಾವ್ಯಾಟ್‌ನಿಂದ 66 ಗಿಗಾವ್ಯಾಟ್‌ಗೆ ಹೆಚ್ಚಿಸುವ 10 ವರ್ಷಗಳ ಮಾರ್ಗಸೂಚಿಯನ್ನು ಗುರುವಾರ ಪ್ರಕಟಿಸಿದೆ.

ನವದೆಹಲಿಯಲ್ಲಿ ನಡೆಯುತ್ತಿರುವ ಭಾರತ್ ಎಲೆಕ್ಟ್ರಿಸಿಟಿ ಇಂಡಿಯನ್ ಯುಟಿಲಿಟಿ ವೀಕ್ 2026 ಶೃಂಗಸಭೆಯ 'ಕರ್ನಾಟಕ ಕೇಂದ್ರೀಕೃತ ರಾಜ್ಯ ಅಧಿವೇಶನ'ದಲ್ಲಿ ಮಾತನಾಡಿದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಈ ಮಾಹಿತಿ ನೀಡಿದರು.

ಒಂದನೇ ಪುಟದಿಂದ..

# ಕೇಂದ್ರದ ನೆರವು ಕೋರಿದ ಡಿಕೆಶಿ

"ನಾನು ಅವರಿಗೆ ಸಹಾಯ ಮಾಡಲು ಬಯಸುತ್ತೇನೆ. ಕೇಂದ್ರ ಸರ್ಕಾರವೂ ಹಣಕಾಸಿನ ನೆರವು ನೀಡಬೇಕು. ಸರ್ವಪಕ್ಷ ನಿಯೋಗವನ್ನು ದೆಹಲಿಗೆ ಕರೆದೊಯ್ಯುವ ಅಗತ್ಯವಿದೆ ಎಂದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ರೈತರ ಸಾಲ ಮನ್ನಾ ಮಾಡುವಂತೆ ಆಗ್ರಹಿಸಿದ್ದಾರೆ" ಎಂದರು.

ರೈತರ ಸಾಲ ಮನ್ನಾದ ಜವಾಬ್ದಾರಿಯನ್ನು ಕೇಂದ್ರ ಸರ್ಕಾರವೇ ವಹಿಸಿಕೊಳ್ಳಬೇಕು. "ಪ್ರಧಾನಿ ಅವರೇ ಇದು ಬರ ಪರಿಸ್ಥಿತಿ ಎಂದು ಹೇಳಿದ್ದಾರೆ. ಹೀಗಾಗಿ ಕೇಂದ್ರ ಸರ್ಕಾರವೇ ಸಾಲ ಮನ್ನಾದ ಹೊಣೆ ಹೊತ್ತುಕೊಳ್ಳಬೇಕು," ಎಂದು ಮುಖ್ಯಮಂತ್ರಿ ಹೇಳಿದರು.

ಈ ವಿಚಾರವಾಗಿ ಕೇಂದ್ರದ ಮೇಲೆ ಒತ್ತಡ ಹೇರಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ತಮ್ಮೊಂದಿಗೆ ದೆಹಲಿಗೆ ಬರಬೇಕು ಎಂದು ಶಿವಕುಮಾರ್ ಕರೆ ನೀಡಿದರು.

ಇದೇ ವೇಳೆ, ಉದ್ಯಾನವನ ಮತ್ತು ಪಾರ್ಕ್‌ಗಳ ಭೂಮಿಯ ಶೇ.5ರಷ್ಟನ್ನು ಸಾರ್ವಜನಿಕ ಮೂಲಸೌಕರ್ಯ ಹಾಗೂ ಉಪಯುಕ್ತತಾ ಯೋಜನೆಗಳಿಗೆ ಬಳಸಲು ಅವಕಾಶ ನೀಡುವ ವಿವಾದಿತ ಪಾರ್ಕ್ಸ್ ಬಿಲ್ ಹಿಂಪಡೆದಿರುವ ಸರ್ಕಾರದ ನಿರ್ಧಾರವನ್ನು ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.

ಬಿಲ್ ಕುರಿತು ಚರ್ಚೆಗೆ ಅವಕಾಶ ಕಲ್ಪಿಸಿ, ಅದರ ಉದ್ದೇಶಗಳ ಬಗ್ಗೆ ಜನರಿಗೆ ಅರಿವು ಮೂಡಿಸುವ ಸಲುವಾಗಿಯೇ ಅದನ್ನು ಹಿಂಪಡೆಯಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಬಿಲ್ ಹಿಂಪಡೆದಿರುವುದನ್ನು ಬಿಜೆಪಿ ತನ್ನ ಗೆಲುವು ಎಂದು ಬಿಂಬಿಸುತ್ತಿರುವುದಕ್ಕೆ ತೀವ್ರವಾಗಿ ಆಕ್ಷೇಪಿಸಿದ ಅವರು, ಬಿಜೆಪಿಯನ್ನು 'ಅಭಿವೃದ್ಧಿ ವಿರೋಧಿ ಪಕ್ಷ' ಎಂದು ಟೀಕಿಸಿದರು. ಬೆಂಗಳೂರಿಗೆ ಎದುರಾಗಿರುವ ಯಾವುದೇ 'ಶಾಪ'ಕ್ಕೂ ಬಿಜೆಪಿಯೇ ಕಾರಣ ಎಂದು ವಾಗ್ದಾಳಿ ನಡೆಸಿದರು.

ಅಂದಹಾಗೆ ಬರ ಪರಿಸ್ಥಿತಿ, ಅದರಿಂದ ಉಂಟಾಗಿರುವ ಕೃಷಿ ಬಿಕ್ಕಟ್ಟು ಹಾಗೂ ಪ್ರಸ್ತಾವಿತ ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ವಲಯಕ್ಕೆ ಸಂಬಂಧಿಸಿದ ಕಸ್ತೂರಿರಂಗನ್ ವರದಿ ಕುರಿತು ಚರ್ಚಿಸಲು ರಾಜ್ಯ ವಿಧಾನಮಂಡಲದ ವಿಶೇಷ ಅಧಿವೇಶನವನ್ನು ಸೆಪ್ಟೆಂಬರ್ 21ರಿಂದ 23ರವರೆಗೆ ಕರೆಯಲಾಗಿದೆ.

# ಶ್ರೇಷ್ಠತೆ, ಸಾಮರ್ಥ್ಯದ ಪ್ರತಿಬಿಂಬ ಇಸ್ರೋದ GSLV-F17 ಯಶಸ್ಸಿಗೆ ಮೋದಿ ಶ್ಲಾಘನೆ

ಯಶಸ್ವಿಯಾಗಿ ಉಡಾವಣೆಯಾಗಿದೆ. ಇಸ್ರೋದ ಈ ಸಾಧನೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. GSLV-F17 ಯಶಸ್ವಿ ಉಡಾವಣೆ ಇಸ್ರೋದ ಮತ್ತೊಂದು ಅತ್ಯುತ್ತಮ ಸಾಧನೆ ಮತ್ತು ನಮ್ಮ ರಾಷ್ಟ್ರಕ್ಕೆ ಹೆಮ್ಮೆಯ ಕ್ಷಣ ಎಂದು ಬಣ್ಣಿಸಿದ್ದಾರೆ. ಜಿಯೋಸಿಂಕ್ರೋನಸ್ ಕಕ್ಷೆಯಿಂದ ಭಾರತದ ಮೊದಲ ಇಮೇಜಿಂಗ್ ಉಪಗ್ರಹವಾದ EOS-05 ಅನ್ನು ಹೊತ್ತ GSLV-F17ನ ಯಶಸ್ವಿ ಉಡಾವಣೆಯು ಭಾರತದ ಬಾಹ್ಯಾಕಾಶ ವಲಯವನ್ನ ವ್ಯಾಖ್ಯಾನಿಸುವ ಶ್ರೇಷ್ಠತೆ, ನಾವೀನ್ಯತೆ ಮತ್ತು ಬೆಳೆಯುತ್ತಿರುವ ಸಾಮರ್ಥ್ಯಗಳ ಪ್ರತಿಬಿಂಬವಾಗಿದೆ. ಇಸ್ರೋ ಮತ್ತು ಭಾರತೀಯ ಉದ್ಯಮದ ನಡುವಿನ ಬೆಳೆಯುತ್ತಿರುವ ಪಾಲುದಾರಿಕೆಯು ನಮ್ಮ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ಹೊಸ ಶಕ್ತಿ ಮತ್ತು ಪ್ರಮಾಣವನ್ನು ಸೇರಿಸುತ್ತಿದೆ. ಅಲ್ಲದೇ ಇಡೀ ಬಾಹ್ಯಾಕಾಶ ಪರಿಸರ ವ್ಯವಸ್ಥೆಯಾದ್ಯಂತ ಭಾರತದ ಸಾಮರ್ಥ್ಯಗಳನ್ನ ವಿಸ್ತರಿಸುತ್ತಿದೆ ಎಂದು ಕೊಂಡಾಡಿದ್ದಾರೆ. ಇಸ್ರೋ ಭಾರತದ ಮೊಟ್ಟಮೊದಲ ಇಮೇಜಿಂಗ್ ಉಪಗ್ರಹವನ್ನ ಯಶಸ್ವಿಯಾಗಿ ಉಡಾಯಿಸಿದ ಸಾಧನೆ ಮಾಡಿದ್ದು, ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದ 2ನೇ ಉಡಾವಣಾ ಪ್ಯಾಡ್‌ನಿಂದ ರಾಕೆಟ್ ಹಾರಿದೆ. ಭೂ ವೀಕ್ಷಣಾ ಸಾಟಲೈಟ್ ಸಬ್–ಜಿಯೋಸಿಂಕ್ರೋನಸ್ ವರ್ಗಾವಣೆ ಕಕ್ಷೆಗೆ ಯಶಸ್ವಿಯಾಗಿ ನಿಯೋಜನೆ ಮಾಡುವಲ್ಲಿ ಯಶಸ್ವಿಯಾಗಿದೆ.

# ನಾಲ್ಕನೇ ದಿನಕ್ಕೆ ಕಾಲಿಟ್ಟ ಬಳ್ಳಾರಿ ಚಲೋ

## ರಾಯಚೂರಿನಿಂದ ಕೊಪ್ಪಳ ಜಿಲ್ಲೆಗೆ ಪಾದಯಾತ್ರೆ ಪ್ರವೇಶ

ಪಾದಯಾತ್ರೆ ನಡೆಯುತ್ತಿದೆ.

ಪಿಂಚಣಿ, ವೃದ್ಧಾಪ್ಯ ವೇತನ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಅತಿಥಿ ಉಪನ್ಯಾಸಕರಿಗೆ ವೇತನ ಪಾವತಿಸುವಲ್ಲಿ ಸರ್ಕಾರದ ವೈಫಲ್ಯ ಖಂಡಿಸಿ ಪಾದಯಾತ್ರೆಯಲ್ಲಿ ಧ್ವನಿ ಎತ್ತಲಿದ್ದಾರೆ. ಮಧ್ಯಾಹ್ನ 2:00 ಗಂಟೆಗೆ ಹಂಚಿನಾಳ ಕ್ಯಾಂಪ್ ಬಳಿ ಭೋಜನ ವಿರಾಮ ಆಯೋಜನೆ ಮಾಡಲಾಗಿದೆ.

ಸಿಂಧನೂರು, ವಿಜಯನಗರ, ಗದಗ, ಕನಕಗಿರಿ, ಹಾವೇರಿ, ಹುಬ್ಬಳ್ಳಿ ಹಾಗೂ ಧಾರವಾಡದ ಕಾರ್ಯಕರ್ತರು ಪಾದಯಾತ್ರೆಯಲ್ಲಿ ಭಾಗಿಯಾಗಲಿದ್ದಾರೆ. ಇಂದು ಸಹ ಬೃಹತ್ ಬಹಿರಂಗ ಸಭೆ ಉದ್ದೇಶಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಮಾತನಾಡಲಿದ್ದಾರೆ.

# ಮಳೆ ಕೊರತೆ, ಬರದ ಆತಂಕ;

## 28.52 ಕೋಟಿ ರೂ. ವೆಚ್ಚದಲ್ಲಿ ಮೋಡ ಬಿತ್ತನೆಗೆ ಸರ್ಕಾರ ಚಾಲನೆ

ಹಾಗೂ ನಾಡಧ್ವಜ ಪ್ರದರ್ಶಿಸುವ ಮೂಲಕ ಕಾರ್ಯಾಚರಣೆಗೆ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಎನ್. ಚಲುವರಾಯಸ್ವಾಮಿ ಅವರು, ಈ ವರ್ಷ ರಾಜ್ಯದಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ಮುಂದಿನ ದಿನಗಳಲ್ಲಿ ತೀವ್ರ ಬರ ಪರಿಸ್ಥಿತಿ ಎದುರಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ಮುಂಗಾರು ಮಳೆಗಾಲ ಈ ತಿಂಗಳ ಅಂತ್ಯಕ್ಕೆ ಮುಕ್ತಾಯಗೊಳ್ಳಲಿದ್ದು, ಅದಕ್ಕೂ ಮುನ್ನ ಅಗತ್ಯ ಪ್ರಮಾಣದ ಕುಡಿಯುವ ನೀರನ್ನು ಸಂಗ್ರಹಿಸಲು ಸಾಧ್ಯವಾಗದಿದ್ದರೆ ಮುಂದಿನ ಜೂನ್‌ವರೆಗೂ ತೀವ್ರ ನೀರಿನ ಅಭಾವ ಎದುರಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ರಾಜ್ಯದಲ್ಲಿ ಎದುರಾಗಬಹುದಾದ ನೀರಿನ ಕೊರತೆಯನ್ನು ತಗ್ಗಿಸುವುದರ ಜೊತೆಗೆ ರೈತರ ಹಿತ ಕಾಪಾಡುವ ಉದ್ದೇಶದಿಂದ ಮೋಡ ಬಿತ್ತನೆ ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಈ ಹಿಂದೆ ರಾಜ್ಯದಲ್ಲಿ ನಡೆದಿದ್ದ ಮೋಡ ಬಿತ್ತನೆ ಕಾರ್ಯಾಚರಣೆ ಶೇ.35ರಷ್ಟು ಯಶಸ್ವಿಯಾಗಿತ್ತು. ಈ ಬಾರಿ ಕೈಗೊಂಡಿರುವ ಯೋಜನೆಯಿಂದ ರಾಜ್ಯದ ಜನರಿಗೆ ಅನುಕೂಲವಾಗಬೇಕು ಎಂಬುದೇ ಸರ್ಕಾರದ ಪ್ರಮುಖ ಉದ್ದೇಶವಾಗಿದೆ.

ಮೋಡ ಬಿತ್ತನೆ ಯೋಜನೆಯಿಂದ ಸರ್ಕಾರಕ್ಕೆ ಆರ್ಥಿಕ ಹೊರೆಯಾಗುವ ಬಗ್ಗೆ ಚಿಂತಿಸುವುದಿಲ್ಲ. ನಾಡಿನ ಹಿತ ಕಾಪಾಡುವುದು ಸರ್ಕಾರದ ಮೊದಲ ಆದ್ಯತೆ ಎಂದು ಸ್ಪಷ್ಟಪಡಿಸಿದರು.

28.52 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗಿರುವ ಈ ಯೋಜನೆಯ ಮೂಲಕ ಮಳೆ ಕೊರತೆಯಿರುವ ಪ್ರದೇಶಗಳಲ್ಲಿ ಮೋಡ ಬಿತ್ತನೆ ನಡೆಸಿ ಮಳೆಯ ಪ್ರಮಾಣ ಹೆಚ್ಚಿಸುವ ಪ್ರಯತ್ನ ಮಾಡಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಜಿ.ಸಿ. ಚಂದ್ರಶೇಖರ್, ಶಾಸಕರಾದ ಎಚ್.ಕೆ. ಪಾಟೀಲ್, ಪ್ರಕಾಶ್ ಕೋಳಿವಾಡ ಹಾಗೂ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 3 ಅಡಿ ಕುಸಿದ ಕೆಆರ್‌ಎಸ್ ಡ್ಯಾಮ್ ನೀರಿನ ಮಟ್ಟ

ಕೆಆರ್‌ಎಸ್ ಡ್ಯಾಂನಿಂದಲೇ ಬಿಡಲಾಗುತ್ತಿದೆ.

ಪ್ರಸ್ತುತ ಕೆಆರ್‌ಎಸ್‌ನಿಂದ ನದಿಗೆ 9 ಸಾವಿರ ಕ್ಯೂಸೆಕ್‌ಗೂ ಅಧಿಕ ನೀರು ಬಿಡುಗಡೆ ಮಾಡಲಾಗುತ್ತಿದೆ. ಈ ಪ್ರಮಾಣದ ನೀರು ಬಿಡುಗಡೆ ಮಾಡುತ್ತಿರುವುದರಿಂದ 3 ದಿನದಲ್ಲಿ 3 ಅಡಿ ಕುಸಿತ ಕಂಡಿದೆ. 111 ಅಡಿಯಷ್ಟಿದ್ದ ನೀರಿನ ಮಟ್ಟ ಇದೀಗ 108 ಅಡಿಗೆ ಇಳಿಕೆಯಾಗಿದೆ. ಸದ್ಯ ಹೇಮಾವತಿ ಜಲಾಶಯದಿಂದ ಬಿಡಲಾಗಿರುವ ನೀರಷ್ಟೇ ಕೆಆರ್‌ಎಸ್‌ಗೆ ಆಸರೆಯಾಗಿ ಹರಿದು ಬರುತ್ತಿದೆ. ತಮಿಳುನಾಡಿಗೆ ನಿರಂತರ ನೀರು ಹರಿಸುತ್ತಿರುವುದರಿಂದ ಕೆಆರ್‌ಎಸ್ ಮಾತ್ರವಲ್ಲದೆ ಕಬಿನಿ, ಹೇಮಾವತಿ ಹಾಗೂ ಹಾರಂಗಿ ಜಲಾಶಯಗಳಲ್ಲೂ ನೀರಿನ ಪ್ರಮಾಣ ತೀವ್ರವಾಗಿ ಇಳಿಕೆಯಾಗುತ್ತಿದೆ.

# ಭಗವದ್ಗೀತೆ ಶ್ರೀಕೃಷ್ಣನ ಜಗತ್ತಿಗೆ ನೀಡಿದ ಅಮೂಲ್ಯ ಕೊಡುಗೆ: ಡಾ. ಔದ್ರಾಮ




ವಿಜಯಪುರ : ಶ್ರೀಕೃಷ್ಣ ಪರಮಾತ್ಮನು ಜಗತ್ತಿಗೆ ನೀಡಿದ ಅಮೂಲ್ಯ ಕೊಡುಗೆಗಳಲ್ಲಿ ಭಗವದ್ಗೀತೆ ಪ್ರಮುಖವಾದುದು. ಅದರಲ್ಲಿರುವ ತತ್ವ, ಜ್ಞಾನ ಹಾಗೂ ಜೀವನ ಮೌಲ್ಯಗಳನ್ನು ಅರಿತು ಪ್ರತಿಯೊಬ್ಬರೂ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಶಾಂತಿ, ಸಹಬಾಳ್ವೆ, ಮಾನವೀಯತೆ ಮತ್ತು ಸೌಹಾರ್ದತೆ ಜೀವನದ ಪ್ರಮುಖ ಮೌಲ್ಯಗಳಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಷ್ಟದ ಸಂದರ್ಭಗಳಲ್ಲಿ ಧೈರ್ಯ ಕಳೆದುಕೊಳ್ಳದೆ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸುವುದು, ಸತ್ಯದ ಮಾರ್ಗದಲ್ಲಿ ಸಾಗುವುದು ಹಾಗೂ ಜ್ಞಾನವನ್ನು ಸಮಾಜದ ಒಳಿತಿಗೆ ಬಳಸುವುದು ಶ್ರೀಕೃಷ್ಣನ ಜೀವನದಿಂದ ಕಲಿಯಬಹುದಾದ ಪ್ರಮುಖ ಪಾಠಗಳಾಗಿವೆ.

ಯುವಜನತೆ ಶ್ರೀಕೃಷ್ಣನ ಆದರ್ಶಗಳು ಮತ್ತು ಭಗವದ್ಗೀತೆಯ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಜ್ಞಾನದ ಹಾದಿಯಲ್ಲಿ ಮುನ್ನಡೆಯಬೇಕು ಎಂದು ಕರೆ ನೀಡಿದರು.

ಉಪನ್ಯಾಸ ನೀಡಿದ ಡಾ. ಮಾಧವ ಗುಡಿ ಅವರು ಶ್ರೀಕೃಷ್ಣನ ಜನನ, ಬಾಲ್ಯ ಜೀವನ, ಮಹಾಭಾರತದಲ್ಲಿನ ಪಾತ್ರ ಹಾಗೂ ಅರ್ಜುನನಿಗೆ ನೀಡಿದ ಭಗವದ್ಗೀತೆಯ ಉಪದೇಶವನ್ನು ವಿವರಿಸಿದರು.

ಕರ್ಮ, ಜ್ಞಾನ, ಧರ್ಮ ಮತ್ತು ಕರ್ತವ್ಯದ ಕುರಿತು ಗೀತೆಯಲ್ಲಿ ಪ್ರತಿಪಾದಿಸಿರುವ ಸಂದೇಶಗಳು ಇಂದಿಗೂ ಮಾನವ ಜೀವನಕ್ಕೆ ದಾರಿದೀಪವಾಗಿವೆ ಎಂದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ವಸಂತ ಹೊನಮೋಡೆ, ಜಿಲ್ಲಾ ಪಂಚಾಯಿತಿಯ ಸಹಾಯಕ ನಿರ್ದೇಶಕ ಡಿ.ಬಿ. ಮೆಂದಳೆ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಂಕರ ಚಲವಾದಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಿಚ್ಛೇದನ ಪ್ರಕರಣ: ಒಂದು ತಿಂಗಳ ವಿಚಾರಣೆ ಗಡುವಿಗೆ ಹೈಕೋರ್ಟ್ ನಕಾರ

ಬೆಂಗಳೂರು: 'ನಾನು ಸಲ್ಲಿಸಿರುವ ವಿವಾಹ ವಿಚ್ಛೇದನ ಕೋರಿಕೆ ಪ್ರಕರಣದ ವಿಚಾರಣೆಯನ್ನು ಒಂದು ತಿಂಗಳಲ್ಲಿ ಪೂರ್ಣಗೊಳಿಸುವಂತೆ ಅಧೀನ ನ್ಯಾಯಾಲಯಕ್ಕೆ ನಿರ್ದೇಶಿಸಬೇಕು' ಎಂದು ಕೋರಲಾಗಿದ್ದ ಪತಿಯ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ಈ ಕುರಿತಂತೆ 35ರ ಪ್ರಾಯದ ಪತಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಚಿಲ್ಲಕೂರು ಸುಮಲತಾ ಅವರಿದ್ದ ಏಕಸದಸ್ಯ ನ್ಯಾಯಪೀಠ, 'ಇಂತಹ ಪ್ರಕರಣಕ್ಕೆ ಕಟ್ಟುನಿಟ್ಟಿನ ಗಡುವು ವಿಧಿಸಲು ಸಾಧ್ಯವಿಲ್ಲ' ಎಂದು ಸ್ಪಷ್ಟಪಡಿಸಿದೆ.

'ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರಿಯಾದ ಮತ್ತು ನ್ಯಾಯಸಮ್ಮತ ತೀರ್ಮಾನಕ್ಕೆ ಬರುವುದು ಸುಲಭದ ಕೆಲಸವಲ್ಲ. ಪ್ರತಿಯೊಬ್ಬ ನ್ಯಾಯಾಂಗ ಅಧಿಕಾರಿಯೂ ತನ್ನ ನ್ಯಾಯಾಲಯದ ಮಾಲೀಕನಾಗಿದ್ದು, ಪ್ರತಿ ಪ್ರಕರಣವೂ ತನ್ನದೇ ವಿಭಿನ್ನತೆ ಹೊಂದಿರುತ್ತದೆ. ಹಾಗಾಗಿ, ಗಡುವು ವಿಧಿಸಿದರೆ ವಿಚಾರಣಾ ನ್ಯಾಯಾಲಯದ ನ್ಯಾಯಾಧೀಶರು ಅನಗತ್ಯ ಮಾನಸಿಕ ಒತ್ತಡಕ್ಕೆ ಒಳಗಾಗುತ್ತಾರೆ' ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ. 'ವಿಚಾರಣಾ ನ್ಯಾಯಾಲಯದ ನ್ಯಾಯಾಧೀಶರು ಈಗಾಗಲೇ ಪ್ರಕರಣವನ್ನು ಸೂಕ್ತ ರೀತಿಯಲ್ಲಿ, ಕ್ಷಿಪ್ರಗತಿಯಲ್ಲಿ ವಿಚಾರಣೆ ನಡೆಸುತ್ತಿರುವುದು ಕಂಡುಬಂದಿದೆ. ಹಾಲಿ ಪ್ರಕರಣ ಸಾಕ್ಷಿಗಳ ಪಾಟಿ ಸವಾಲಿನ ಹಂತದಲ್ಲಿದ್ದು ಯಾವುದೇ ಒತ್ತಡ ಹೇರಲಾಗದು' ಎಂದು ತಿಳಿಸಿದೆ.

# ದಸರಾದಲ್ಲಿ ನಿಶಾನೆ ಆನೆಯಾಗಿ 'ಅಭಿಮನ್ಯು' ಎಂಟ್ರಿ; ಪಟ್ಟದ ಆನೆಯಾಗಿ ಶ್ರೀಕಂಠ ಆಯ್ಕೆ

ಮೈಸೂರು: ಸುಮಾರು 25 ವರ್ಷಗಳಿಗೂ ಅಧಿಕ ಕಾಲ ಮೈಸೂರು ದಸರಾ ಮಹೋತ್ಸವದಲ್ಲಿ ಭಾಗವಹಿಸಿ, ಸತತ 6 ಬಾರಿ ಚಿನ್ನದ ಅಂಬಾರಿಯನ್ನು ಹೊತ್ತು ವಿಜೃಂಭಣೆಯಿಂದ ಹೆಜ್ಜೆ ಹಾಕಿದ್ದ, ಏಷ್ಯಾದ ನಂ.1 ಕುಮ್ಕಿ ಆನೆಯಾದ ಅಭಿಮನ್ಯು ಅಭಿಮಾನಿಗಳಿಗೆ ಗುಡ್ ನ್ಯೂಸ್; ಅದುವೇ, ಈ ಬಾರಿಯ ದಸರಾಗೆ ಬರುತ್ತಿದ್ದಾನೆ ರಣ ಬೇಟೆಗಾರ ಅಭಿಮನ್ಯು. ಹೌದು, 2026ರ ಮೈಸೂರು ದಸರಾ ಮಹೋತ್ಸವದಲ್ಲಿ ಕ್ಯಾಪ್ಟನ್ ಅಭಿಮನ್ಯು 'ನಿಶಾನೆ ಆನೆ'ಯಾಗಿ ಭಾಗವಹಿಸುವುದು ಅಧಿಕೃತವಾಗಿ ಖಚಿತಪಟ್ಟಿದೆ.60 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಅಭಿಮನ್ಯುವಿಗೆ ಈ ಬಾರಿ ಚಿನ್ನದ ಅಂಬಾರಿ ಹೊರುವ ಜವಾಬ್ದಾರಿಯಿಂದ ನಿವೃತ್ತಿ ನೀಡಿ, ಆಗಸ್ಟ್ 26ರ ಗಜಪಯಣದ ವೇಳೆ ಗೌರವಯುತ ಬೀಳ್ಕೊಡುಗೆ ನೀಡಲಾಗಿತ್ತು. ಆದರೆ, ದಸರಾ ಆನೆಗಳ ಪಟ್ಟಿಯಲ್ಲಿ ಅಭಿಮನ್ಯು ಹೆಸರು ಇಲ್ಲದಿರುವುದಕ್ಕೆ ಅಭಿಮಾನಿಗಳಿಂದ ತೀವ್ರ ಬೇಸರ ಹಾಗೂ ಸಾರ್ವಜನಿಕ ವಲಯದಲ್ಲಿ ದೊಡ್ಡ ಮಟ್ಟದ ಒತ್ತಾಯ ಕೇಳಿಬಂದಿತ್ತು. ಅದರಂತೆ, ಜನರ ಒತ್ತಾಯಕ್ಕೆ ಮಣಿದ ಸರ್ಕಾರ, ಅಂತಿಮವಾಗಿ ಅಭಿಮನ್ಯುವನ್ನು ಜಂಬೂಸವಾರಿಯಲ್ಲಿ ನಿಶಾನೆ ಆನೆಯನ್ನಾಗಿ ಕಳುಹಿಸಲು ಹಸಿರು ನಿಶಾನೆ ನೀಡಿದೆ.

ಒಂದನೇ ಪುಟದಿಂದ..

# ಬಳ್ಳಾರಿಯಲ್ಲಿ ಸಂಭ್ರಮದ ಶ್ರೀ ಕೃಷ್ಣ ಜಯಂತ್ಯೋತ್ಸವ

ಸಂದರ್ಭದಲ್ಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಉಪಸ್ಥಿತಿಯಲ್ಲಿ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸುವುದಾಗಿ ಅವರು ತಿಳಿಸಿದರು. ಗೊಲ್ಲರ ಸಮಾಜವು ಸದಾ ದಾನ–ಧರ್ಮ ಹಾಗೂ ಸಮಾಜ ಸೇವೆಯಲ್ಲಿ ಮುಂಚೂಣಿಯಲ್ಲಿದೆ. ಇಂತಹ ಸಮುದಾಯದ ಕೊಡುಗೆಯನ್ನು ಗೌರವಿಸಿ ರಾಜಕೀಯವಾಗಿಯೂ ಶಕ್ತಿ ತುಂಬಲಾಗಿದೆ. ಸಮುದಾಯದ ಮುಖಂಡರು ರಾಜಕೀಯ ಮುನ್ನೆಲೆಗೆ ಬಂದಾಗ ಮಾತ್ರ ಜನಸಾಮಾನ್ಯರಿಗೆ ಹೆಚ್ಚಿನ ಅನುಕೂಲವಾಗಲು ಸಾಧ್ಯ ಎಂದರು. ಹುಟ್ಟಿದ ತಕ್ಷಣವೇ ಸೋದರಮಾವನಿಂದಲೇ ಪ್ರಾಣಾಪಾಯ ಎದುರಿಸಿದ ಕೃಷ್ಣ, ಜನ್ಮ ನೀಡಿದ ತಾಯಿ ಹಾಗೂ ಬೆಳೆಸಿದ ಪೋಷಕರಿಂದ ದೂರವಾಗಿ ಅಪಾರ ಕಷ್ಟ–ಸಂಕಟಗಳನ್ನು ಎದುರಿಸಿದರು. ಗಾಂಧಾರಿಯ ಶಾಪ, ಸ್ವಂತ ವಂಶದ ಮಕ್ಕಳ ವಿನಾಶದಂತಹ ಅತೀವ ನೋವುಗಳ ನಡುವೆಯೂ ಕೃಷ್ಣ ಧರ್ಮ ರಕ್ಷಣೆಯ ಹಾದಿಯನ್ನು ಬಿಡಲಿಲ್ಲ. ಸಣ್ಣಪುಟ್ಟ ಸಂಕಷ್ಟಗಳಿಗೆ ಧೃತಿಗೆಡದೆ 'ಧರ್ಮೋ ರಕ್ಷತಿ ರಕ್ಷಿತಃ' ಎಂಬ ತತ್ವವನ್ನು ಪ್ರತಿಯೊಬ್ಬರೂ ಪಾಲಿಸಬೇಕು. ಧರ್ಮ ಮಾರ್ಗದಲ್ಲಿ ಸಾಗಿ ಸಮಾಜ ಹಾಗೂ ದೇಶದ ಒಳಿತಿಗಾಗಿ ಶ್ರಮಿಸುವುದೇ ಶ್ರೀಕಷ್ಣ ಬದುಕಿನಿಂದ ನಾವು ಕಲಿಯಬೇಕಾದ ಪಾಠವಾಗಿದೆ ಎಂದರು.ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಮಾತನಾಡಿ, ಮಹಾ ವಿಷ್ಣುವಿನ ದಶಾವತಾರಗಳಲ್ಲಿ ಒಂದಾದ ಶ್ರೀಕೃಷ್ಣನ ಅವತಾರವು ಲೋಕದಲ್ಲಿ ಧರ್ಮವನ್ನು ರಕ್ಷಿಸಿ ಅಧರ್ಮವನ್ನು ತೊಡೆದುಹಾಕಲು ಸಂಭವಿಸಿತು. ಧರ್ಮಕ್ಕೆ ಯಾವಾಗ ಆಪತ್ತು ಎದುರಾಗುತ್ತದೆಯೋ ಆಗೆಲ್ಲ ಭಗವಂತನು ಮನುಷ್ಯನಾಗಿ ಭೂಮಿಗೆ ಬಂದು ಧರ್ಮ ಸಂಸ್ಥಾಪನೆ ಮಾಡುತ್ತಾನೆ ಎಂಬ ಭಗವದ್ಗೀತೆಯ ತತ್ವವನ್ನು ಅವರು ಸ್ಮರಿಸಿದರು. ಹುಟ್ಟು ಆಕಸ್ಮಿಕ, ಆದರೆ ಸಾವು ನಿಶ್ಚಿತ. ಇವೆರಡೂ ಪ್ರಕೃತಿಯ ನಿಯಮಗಳಾಗಿದ್ದು, ಯಾರಿಂದಲೂ ತಪ್ಪಿಸಲು ಸಾಧ್ಯವಿಲ್ಲ. ಇದನ್ನು ಎದುರಿಸಲು ಮಾನವ ಸದಾ ಸಿದ್ಧನಾಗಿರಬೇಕು. ಕಷ್ಟ–ತೊಂದರೆಗಳು ಬಂದಾಗ ಪ್ರಾಮಾಣಿಕತೆಯಿಂದ ಇದ್ದು ಎದುರಿಸಬೇಕು, ಧನ–ಸಂಪತ್ತು ಇದ್ದಾಗ ಸರಳವಾಗಿರ ಬೇಕು, ಅಧಿಕಾರ ದೊರೆತಾಗ ವಿನಯತೆ ಪ್ರದರ್ಶಿಸಬೇಕು ಹಾಗೂ ಕೋಪ ಬಂದಾಗ ಶಾಂತತೆಯನ್ನು ಕಾಪಾಡಿಕೊಳ್ಳುವುದೇ ನಿಜವಾದ ಜೀವನ ನಿರ್ವಹಣೆ ಎಂದು ಶ್ರೀ ಕೃಷ್ಣನ ತತ್ವಗಳನ್ನು ವಿವರಿಸಿದರು. ಜೀವನದಲ್ಲಿ ಶಾಶ್ವತವಾದ ಸುಖ–ದುಃಖ ಇರುವುದಿಲ್ಲ, ಬದಲಿಗೆ ಬದುಕಿನಲ್ಲಿ ದೊರೆಯುವುದೆಲ್ಲ ಕೇವಲ ಅನುಭವಗಳು ಮಾತ್ರ. ಜೀವನದಲ್ಲಿ ಏನೇ ಸಂಭವಿಸಿದರೂ ಅದು ಒಳ್ಳೆಯದಕ್ಕಾಗಿಯೇ ಆಗಿರುತ್ತದೆ. ಆಗುವುದೆಲ್ಲವೂ ಒಳ್ಳೆಯದಕ್ಕೇ ಎಂಬ ಸಕಾರಾತ್ಮಕ ಭಾವನೆಯನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಕೃಷ್ಣನ ಬೋಧನೆಗಳು ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ ಪ್ರತಿಯೊಬ್ಬರ ದೈನಂದಿನ ಬದುಕಿಗೂ ದಾರಿದೀಪವಾಗಬೇಕು ಎಂದು ಕರೆ ನೀಡಿದರು. ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಮಾತನಾಡಿ, ಶ್ರೀಕೃಷ್ಣ ಕೇವಲ ಒಂದು ಸಮಾಜಕ್ಕೆ ಸೀಮಿತವಾಗಿರದೆ ಇಡೀ ಜಗತ್ತಿಗೆ ಮಾರ್ಗದರ್ಶನ ನೀಡಿದ ವಿಶ್ವಗುರು ಆಗಿದ್ದವರು ಎಂದು ಹೇಳಿದರು.ಬಳ್ಳಾರಿ ಜಿಲ್ಲಾ ಯಾದವ ಸಂಘಕ್ಕೆ ಹಿಂದಿನ ವರ್ಷ ಸಮುದಾಯದವರ ಸಹಕಾರದಿಂದ ನಿವೇಶನ ಖರೀದಿಸಲಾಗಿದೆ. ಅಲ್ಲಿ ಸಮಾಜದ ಬಹುದಿನಗಳ ಬೇಡಿಕೆಯಾದ ಸಮುದಾಯ ಭವನ ಹಾಗೂ ಶ್ರೀಕೃಷ್ಣನ ದೇವಾಲಯ ನಿರ್ಮಾಣಕ್ಕೆ ರೂ.2.5 ಕೋಟಿ ವೆಚ್ಚದ ನೀಲನಕ್ಷೆ ಹಾಗೂ ಅಗತ್ಯ ಪರವಾನಗಿಗಳನ್ನು ಪಡೆದುಕೊಳ್ಳಲಾಗಿದೆ ಎಂದು ತಿಳಿಸಿದರು.

ಸರ್ಕಾರದ ಜಯಂತಿಗಳ ಜೊತೆಗೆ ಸಣ್ಣ ಸಣ್ಣ ಸಮುದಾಯಗಳನ್ನು ಒಗ್ಗೂಡಿಸಿ ಉತ್ಸಾಹ ತುಂಬುವ ಉದ್ದೇಶದಿಂದ, ಶಾಸಕರು ಹಾಗೂ ಮಹಾನಗರ ಪಾಲಿಕೆ ಸದಸ್ಯರ ಸಹಕಾರದೊಂದಿಗೆ ಸಣ್ಣ ಸಮಾಜಗಳ ಜಯಂತಿ ಆಚರಣೆಗೆ ರೂ. 50 ಸಾವಿರ ಅನುದಾನ ಬಳ್ಳಾರಿ ಮಹಾನಗರ ಪಾಲಿಕೆಯಿಂದ ಒದಗಿಸಿರುವುದು ಶ್ಲಾಘನೀಯ ಎಂದು ಹರ್ಷ ವ್ಯಕ್ತಪಡಿಸಿದರು. ಶ್ರೀ ಸತ್ಯಂ ಶಿಕ್ಷಣ ಮಹಾವಿದ್ಯಾಲಯ ಸಹಾಯಕ ಪ್ರಾಧ್ಯಾಪಕ ಆಲಂಬಾಷ ಅವರು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಬಳ್ಳಾ–ರಿಯ ವೈ.ಬಸವರಾಜ ತಂಡದ ಸಮೂಹ ನೃತ್ಯ ನೋಡುಗರ ಮನಸೆಳೆಯಿತು. ಕಾರ್ಯಕ್ರಮ ಆರಂಭಕ್ಕೂ ಮುನ್ನ ಸಂವಿಧಾನ ಪ್ರಸ್ತಾವನೆ ಬೋಧಿಸಲಾಯಿತು. ನಗರದಲ್ಲಿ ಶ್ರೀ ಕೃಷ್ಣ ಜಯಂತಿ ಅಂಗವಾಗಿ ಅತ್ಯಂತ ಸಂಭ್ರಮ ಹಾಗೂ ಸಡಗರದೊಂದಿಗೆ ಅದ್ದೂರಿ ಮೆರವಣಿಗೆ ನಡೆಯಿತು. ನಗರದ ಮುನ್ಸಿಪಾಲ್ ಕಾಲೇಜು ಆವರಣದಿಂದ ಮೆರವಣಿಗೆಗೆ ಗಣ್ಯರು ಚಾಲನೆ ನೀಡಿದರು. ನಗರದ ಪ್ರಮುಖ ರಸ್ತೆಗಳಾದ ಇಂದಿರಾ ವೃತ್ತ, ಗಡಿಗಿ ಚನ್ನಪ್ಪ ವೃತ್ತ ಹಾಗೂ ಹಳೇ ಜಿಲ್ಲಾಧಿಕಾರಿಗಳ ಕಚೇರಿ ರಸ್ತೆಯ ಮೂಲಕ ಹೆಚ್.ಆರ್. ಗವಿಯಪ್ಪ ವೃತ್ತದ ಮಾರ್ಗವಾಗಿ ಚಲಿಸಿ, ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಸಭಾಂಗಣವನ್ನು ತಲುಪಿ ಸಂಪನ್ನಗೊಂಡಿತು. ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಪಾಲ್ಗೊಂಡು ಮೆರಗು ಹೆಚ್ಚಿಸಿದವು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಗೊಲ್ಲರ ಸಂಘದ ಗೌರವಾಧ್ಯಕ್ಷ ಪಿ.ತಿಮ್ಮಪ್ಪ ಯಾದವ್, ಸಹಾಯಕ ಆಯುಕ್ತ ರಾಜೇಶ್.ಹೆಚ್.ಡಿ., ತಹಶೀಲ್ದಾರರಾದ ಟಿ.ರೇಖಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು, ಸ್ಥಳೀಯ ಜನಪ್ರತಿನಿಧಿಗಳು, ವಿವಿಧ ಸಂಘ– ಸಂಸ್ಥೆಗಳ ಪದಾಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಕೆರೆ ಒತ್ತುವರಿ ಮಾಡಿದರೆ ಕ್ರಿಮಿನಲ್ ಕೇಸ್: ಖಂಡ್ರೆ

ಈ ಪೈಕಿ 6,670 ಕೆರೆ ಒತ್ತುವರಿ ತೆರವು ಮಾಡಲಾಗಿದ್ದು, ಇನ್ನೂ 4,828 ಕೆರೆಗಳ 11,671 ಎಕರೆ ಒತ್ತುವರಿ ತೆರವು ಮಾಡಬೇಕಿದೆ. ಕೂಡಲೇ ಕೆರೆ ಒತ್ತುವರಿ ತೆರವಿಗೆ ಸೂಚನೆ ನೀಡಿದ್ದು, ಇನ್ನು ಮುಂದೆ ಯಾರೇ ಹೊಸದಾಗಿ ಕೆರೆ ಒತ್ತುವರಿ ಮಾಡಿದರೆ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಎಂದು ತಿಳಿಸಿದ್ದಾರೆ.

ಜಲಶಕ್ತಿ ಸಚಿವಾಲಯ ದೆಹಲಿಯಲ್ಲಿ ಆಯೋಜಿಸಿದ್ದ 2 ದಿನಗಳ ಸುಸ್ಥಿರ ಜಲ ಕುರಿತ ಇಲಾಖಾ ಶೃಂಗಸಭೆಯಲ್ಲಿ ನಾನು ಭಾಗಿಯಾಗಿ, ಪ್ರಧಾನಿಯವರ ಸಮ್ಮುಖದಲ್ಲಿ ರಾಜ್ಯ ಸರ್ಕಾರ ಜಲ ಸಂರಕ್ಷಣೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಪ್ರಾತ್ಯಕ್ಷಿಕೆ ಪ್ರಸ್ತುತ ಪಡಿಸಿದ್ದಾಗಿ ಹೇಳಿದ್ದಾರೆ. ರಾಜ್ಯದ ಬಹುತೇಕ ಕಡೆ ಭೂಮಿಯೊಳಗೆ ಹೆಬ್ಬಂಡೆಗಳು ಮತ್ತು ಲ್ಯಾಟ–ರೈಟ್ ಇರುವ ಕಾರಣ ಮಳೆಯ ನೀರು ಇಂಗದೇ ಅಂತರ್ಜಲ ಕುಸಿಯುತ್ತಿದೆ. ಅತಿಯಾದ ಅಂತರ್ಜಲ ಬಳಕೆಯಿಂದಲೂ ಭೂಮಿಯೊಳಗಿನ ಜಲ ಮಟ್ಟ ಕುಸಿದಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ಮೇಲ್ಮೈ ಜಲ ಮೂಲಗಳೇ ಜೀವನಾಧಾರವಾಗಿದ್ದು, ನಾವು ಕೆರೆ, ಕಟ್ಟೆ, ಸರೋವರ, ನದಿಗಳನ್ನು ಸಂರಕ್ಷಿಸದಿದ್ದರೆ ಜಲಕ್ಷಾಮವೇ ಎದುರಾಗುತ್ತದೆ. ಅಂತರ್ಜಲ ದಿನದಿಂದ ದಿನಕ್ಕೆ ಕುಸಿಯುತ್ತಿದ್ದು, ಮೇಲ್ಮೈ ಜಲ ಮೂಲಗಳನ್ನು ರಕ್ಷಿಸದಿದ್ದರೆ ಮುಂದೆ ನೀರಿಗೆ ಹಾಹಾಕಾರ ಎದುರಾಗಲಿದೆ ಎಂದಿದ್ದಾರೆ.

ಇಡೀ ಭೂಮಿಯ ಸುತ್ತ ನೀರಿದೆ. ಆದರೆ ಕುಡಿಯುವ ನೀರು ಇರುವುದು ಶೇ.3ರಷ್ಟು ಮಾತ್ರ. ಹೀಗಾಗಿ ಜಲಮೂಲಗಳನ್ನು ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಅದಕ್ಕಾಗಿಯೇ ನಾನು ಶೃಂಗಸಭೆಯ ಸಮಾರೋಪ ಸಮಾರಂಭದಲ್ಲಿ ಪ್ರಧಾನಿಯವರ ಸಮ್ಮುಖದಲ್ಲೇ ಕೆರೆ, ಸರೋವರ, ನದಿಗಳ ನೀರು ತ್ಯಾಜ್ಯ ಸೇರ್ಪಡೆಯಿಂದ ಕಲುಷಿತಗೊಳ್ಳದಂತೆ ಹಾಗೂ ಒತ್ತುವರಿಯಾಗದಂತೆ ಸಂರಕ್ಷಿಸಲು ರಾಷ್ಟ್ರೀಯ ಯೋಜನೆ ರೂಪಿಸಲು ಒತ್ತಾಯಿಸಿದ್ದಾಗಿ ತಿಳಿಸಿದ್ದಾರೆ. ರಾಜ್ಯದ 26,589 ಹಳ್ಳಿಗಳಲ್ಲಿ 4.45 ಕೋಟಿ ಜನರು ವಾಸಿಸುತ್ತಿದ್ದಾರೆ. ಅಂದರೆ ರಾಜ್ಯದ ಒಟ್ಟು ಜನಸಂಖ್ಯೆಯ ಅರ್ಧಕ್ಕಿಂತ ಹೆಚ್ಚು ಜನರು ಹಳ್ಳಿಗಳಲ್ಲಿದ್ದಾರೆ. ಇವರೆಲ್ಲರಿಗೂ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ದೊಡ್ಡ ಸವಾಲಾಗಿದ್ದು, ಸರ್ಕಾರ ಮುಂದಿನ 30 ವರ್ಷಗಳಲ್ಲಿ ಹೆಚ್ಚಳವಾಗುವ ಜನಸಂಖ್ಯೆಯನ್ನೂ ಗಮನದಲ್ಲಿಟ್ಟುಕೊಂಡು ಏಕಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸುತ್ತಿದೆ, ಮೇಲ್ಮೈ ಜಲದ ಗುಣಮಟ್ಟ ಪರೀಕ್ಷೆಗೆ 1.51 ಲಕ್ಷ ಮಹಿಳೆಯರಿಗೆ ತರಬೇತಿ ನೀಡಿದ್ದು, ಅವರಿಗೆ ಕ್ಷೇತ್ರೀಯ ಪರೀಕ್ಷಾ ಕಿಟ್ ನೀಡಲಾಗಿದೆ ಎಂದಿದ್ದಾರೆ.ಇಡೀ ದೇಶದಲ್ಲಿ ವಾಟರ್ ಬಜೆಟಿಂಗ್ ಮಾಡಿದ ಪ್ರಥಮ ರಾಜ್ಯ ಕರ್ನಾಟಕವಾಗಿದೆ. ಇದರಿಂದ ನಿರ್ದಿಷ್ಟ ಭೌಗೋಳಿಕ ಪ್ರದೇಶದಲ್ಲಿ ಲಭ್ಯವಿರುವ ನೀರಿನ ಪ್ರಮಾಣ ಮತ್ತು ಆ ಪ್ರದೇಶದ ನೀರಿನ ಹಾಲಿ ಬೇಡಿಕೆ, ಭವಿಷ್ಯದ ಬೇಡಿ–ಕೆ ಲೆಕ್ಕಹಾಕಿ ಸಮತೋಲಿತವಾಗಿ ನೀರು ಪೂರೈಕೆಗೆ ವೈಜ್ಞಾನಿಕ ಹಾಗೂ ವ್ಯವಸ್ಥಿತ ಯೋಜನೆ ರೂಪಿಸಲು ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯದ 268 ಹಳ್ಳಿಗಳಲ್ಲಿ ನಿರಂತರ ಕುಡಿಯುವ ನೀರು ಪೂರೈಕೆ ಯೋಜನೆ ಜಾರಿಗೆ ತಂದಿದ್ದು, ಇದ–ರಿಂದಾಗಿ ಶೇ.7ರಷ್ಟು ಕುಡಿಯುವ ನೀರಿನ ಹಾಗೂ ಶೇ.12ರಷ್ಟು ನೀರು ಪಂಪ್ ಮಾಡುವ ವಿದ್ಯುತ್ ಅವಧಿಯ ಉಳಿತಾಯವಾಗಿದೆ. ಜಿಲ್ಲಾ ನೀರು ಮತ್ತು ನೈರ್ಮಲ್ಯ ಅಭಿಯಾನದಡಿ ಡಿಸ್ಟ್ರಿಕ್ಟ್ ಫೆಡರಲ್ ಕೌಂಟ್ ಮಾಡಿ ಜಿಲ್ಲೆಯಲ್ಲಿ ರಾಜ್ಯಮಟ್ಟದಲ್ಲಿ ಸಮಿತಿ ರಚಿಸಿದ್ದೇವೆ. ಇದು ರಾಜ್ಯದಲ್ಲಿ ಶಾಶ್ವತ ಕುಡಿಯುವ ನೀರು ಪೂರೈಕೆಗೆ ಕ್ರಮ ಕೈಗೊಂಡಿದ್ದೇವೆ ಎಂಬ ವಿಷಯವನ್ನೂ ನಾನು ಶೃಂಗಸಭೆಯಲ್ಲಿ ತಿಳಿಸಿದ್ದೇನೆ ಎಂದು ಹೇಳಿದ್ದಾರೆ

# ಪಂಪ ಕನ್ನಡ ಸಾಹಿತ್ಯದ ಶ್ರೇಷ್ಠ ಕವಿ



ಬಳ್ಳಾರಿ : ಪಂಪನು ಭಾರತೀಯ ಭಾಷೆಗಳಲ್ಲಿಯೇ ಉತ್ಕೃಷ್ಟ ಕಾವ್ಯ ರಚಿಸಿ ನಂತರದ ಕವಿಗಳಿಗೆ ಮಾರ್ಗದರ್ಶಕನಾಗಿರುವುದು ಹೆಮ್ಮೆಯ ಸಂಗತಿ ಎಂದು ಲೋಹಿಯಾ ಪ್ರಕಾಶನದ ಮುಖ್ಯಸ್ಥ ಸಿ.ಚನ್ನಬಸವಣ್ಣ ಹೇಳಿದರು.

ನಗರದ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ (ಸ್ವಾ-ಯತ್ತ ) ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸೆಯ ಕೋಶ ಹಾಗೂ ಕನ್ನಡ ವಿಭಾಗದಿಂದ ಶುಕ್ರವಾರ ಆಯೋಜಿಸಿದ್ದ ಪಂಪನ ಕರ್ಣ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪಂಪ ಕನ್ನಡ ಸಾಹಿತ್ಯದ ಒಬ್ಬ ಶ್ರೇಷ್ಠ ಕವಿಯಾಗಿದ್ದರು. ಪಂಪನ ಕಾವ್ಯತತ್ವ, ಚಿಂತನೆ, ಲೋಕಾನುಭವ ವಿಶಿಷ್ಟವಾದುದು. ಅವರ ಅಪರೂಪದ ಸಾಹಿತ್ಯ ಮತ್ತೆ ಮತ್ತೆ ಓದುವುದರ ಮೂಲಕ ನಾವು ಕನ್ನಡದ ಹೆಮ್ಮೆಯ ವಾರಸುದಾರರಾಗಬೇಕಿದೆ ಎಂದರು.

ಲೇಖಕ ಡಾ.ಜಾಜಿ ದೇವೇಂದ್ರಪ್ಪ ಮಾತನಾಡಿ, ಪಂಪನ ಭಾರತವು ಬರಿ ಮಹಾಭಾರತದ ಕಥೆಯಲ್ಲ. ಅದು ದೇಸಿಯ ಕಥೆ. ಪಂಪಭಾರತ ಮಹಾಕಾವ್ಯದಲ್ಲಿ ಬರುವ ಯುದ್ಧದ ಪ್ರಸಂಗ, ಮಾತುಕತೆ, ಶೈಲಿ ಎಲ್ಲವೂ ದೇಸಿಯತೆಯನ್ನು ಎತ್ತಿ ಹಿಡಿಯುತ್ತವೆ ಎಂದು ಬಣ್ಣಿಸಿದರು. ಕನ್ನಡ ವಿಭಾಗದ ಮುಖ್ಯಸ್ಥ ದಸ್ತಗೀರಸಾಬ್ ದಿನ್ನಿ ಮಾತನಾಡಿ, ಇಂದು ಹಳೆಗನ್ನಡ ಸಾಹಿತ್ಯ ಓದುವ, ಬೋಧಿಸುವ ಕೆಲಸ ಕಡಿಮೆಯಾಗುತ್ತಿದೆ. ಹಳೆಗನ್ನಡ ಸಾಹಿತ್ಯದಲ್ಲಿ ಈ ಹೊತ್ತಿಗೂ ಬೇಕಾಗುವ ಜೀವನ ಮೌಲ್ಯಗಳು, ಚಿಂತನಾ ಧಾರೆಗಳಿವೆ. ಹೊಸ ತಲೆಮಾರಿಗೆ ಹಳೆಗನ್ನಡ ಸಾಹಿತ್ಯದ ಬಗೆಗೆ ಪ್ರೀತಿ, ಅಭಿರುಚಿ ಬೆಳೆಸಲು ಈ ಬಗೆಯ ಕಾರ್ಯಕ್ರಮಗಳು ನೆರವಾಗಬಲ್ಲವು ಎಂದರು.

# ಟಿ.ದುರುಗಪ್ಪಗೆ ರಾಜ್ಯಮಟ್ಟದ ಶಿಕ್ಷಕ ಪ್ರಶಸ್ತಿ



ಬಳ್ಳಾರಿ : ಜಿಲ್ಲೆಯ ಸಿರಗುಪ್ಪ ತಾಲೂಕಿನ ಕೊಂಚಿಗೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಟಿ.ದುರುಗಪ್ಪ ಅವರು ಪ್ರಸಕ್ತ ಸಾಲಿನ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಕಳೆದ ಐದು ವರ್ಷಗಳಿಂದ ಕೊಂಚಿಗೇರಿ ಶಾಲೆಯಲ್ಲಿ ಮುಖ್ಯಗುರುವಾಗಿ ಸೇವೆ ಸಲ್ಲಿಸಿ ಶಾಲೆ ಮತ್ತು ಶಿಕ್ಷಣದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಪ್ರಸ್ತುತ ಹದಿನೇಳು ವರ್ಷಗಳ ಸುದೀರ್ಘ ಬೋಧನಾ ಅನುಭವ ಹೊಂದಿದ್ದು, ಈ ಮುನ್ನ ತಾಲೂಕಿನ ಸಿರಿಗೇರಿ ಗ್ರಾಮದಲ್ಲಿ ಎಂಟು ವರ್ಷಗಳ ಕಾಲ ಸಮೂಹ ಸಂಪನ್ಮೂಲ ವ್ಯಕ್ತಿಯಾಗಿ (ಸಿಆರ್‌ಪಿ) ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದರು.

ಮೂಲತಃ ತಾಲೂಕಿನ ಮುದ್ದಟ್ಟನೂರು ಗ್ರಾಮದವರಾದ ದುರುಗಪ್ಪ ಅವರ ಶೈಕ್ಷಣಿಕ ಹಾಗೂ ಸಾಮಾಜಿಕ ಸೇವೆಯನ್ನು ಗುರುತಿಸಿ ಈಗಾಗಲೇ ಜಿಲ್ಲಾದ್ಯಂತ ಹಲವು ಸಂಘ-ಸಂಸ್ಥೆಗಳು ನಾನಾ ಪ್ರಶಸ್ತಿ ನೀಡಿ ಗೌರವಿಸಿವೆ. ಇದೀಗ ಅವರಿಗೆ ರಾಜ್ಯಮಟ್ಟದ ಗೌರವ ಒಲಿದು ಬಂದಿರುವುದು ತಾಲೂಕಿಗೆ ಹಾಗೂ ಜಿಲ್ಲೆಗೆ ಹೆಮ್ಮೆ ತಂದಿದೆ.

# ಕೃಷ್ಣ ಜನ್ಮಾಷ್ಟಮಿ ಸಂಭ್ರಮ



ಬಳ್ಳಾರಿ : ನಗರದ ರಾಯಲ್ ಕಾಲನಿಯ ಶ್ರೀವಿಠ ಕೃಷ್ಣ ದೇವಸ್ಥಾನದಲ್ಲಿ ಕೃಷ್ಣ ಜನ್ಮಾಷ್ಟಮಿ ಸಂಭ್ರಮವು ಶ್ರದ್ಧಾ-ಭಕ್ತಿಯಿಂದ ಶುಕ್ರವಾರ ಅದ್ಧೂರಿಯಾಗಿ ಜರುಗಿ-ತು. ಧರ್ಮ ಸಂಸ್ಥಾಪನೆಗಾಗಿ ಪ್ರತಿ ಯುಗದಲ್ಲೂ ಅವತರಿಸುವ ಶ್ರೀಕೃಷ್ಣನ ಜನ್ಮದಿನೋತ್ಸವವನ್ನು ಭಕ್ತರು ಸಡಗರದಿಂದ ಆಚರಿಸಿದರು. ಜನ್ಮಾಷ್ಟಮಿ ದಿನದ ಅಂಗವಾಗಿ ಬೆಳಗ್ಗೆ ಸುಪ್ರಭಾತ, ನಿರ್ಮಾಲ್ಯಾಭಿಷೇಕ, ಮಹಾಭಿಷೇಕ ಹಾಗೂ ಪಂಚಾಮೃತಾಭಿಷೇಕ ಪೂಜಾ ಕೈಂಕರ್ಯಗಳು ನೆರವೇರಿದವು. ಶ್ರೀಕೃಷ್ಣನಿಗೆ ಹೂವಿನ ಅಲಂಕಾರ ಮಾಡಿ, ಮಹಾಮಂಗಳಾರತಿ ನೆರವೇರಿಸಲಾಯಿತು.

# ಕಾಣೆಯಾದ ಮಕ್ಕಳ ಶೀಘ್ರ ಪತ್ತೆ ಹಚ್ಚಿ



ಬಳ್ಳಾರಿ : ಜಿಲ್ಲೆಯಲ್ಲಿ ಅಪಹರಣಕ್ಕೊಳಗಾದ ಹಾಗೂ ಕಾಣೆಯಾದ ಮಕ್ಕಳನ್ನು ಶೀಘ್ರ ಪತ್ತೆಹಚ್ಚಬೇಕು ಎಂದು ಎಸ್ಪಿ ಡಾ.ಸುಮನ್ ಡಿ.ಪನ್ನೇಕರ್ ಹೇಳಿದರು. ನಗರದ ಎಸ್ಪಿ ಕಚೇರಿಯಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕದಿಂದ ಆಯೋಜಿಸಿದ್ದ ಅಪಹರಣಕ್ಕೊಳಗಾದ ಮತ್ತು ಕಾಣೆಯಾದ ಮಕ್ಕಳ ದೂರುಗಳ ಪರಿಶೀಲನಾ ಜಿಲ್ಲಾ ಮಟ್ಟದ ಕಾರ್ಯಪಡೆಯ ಸಭೆಯಲ್ಲಿ ಮಾತನಾಡಿದರು. ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ, ಬಾಲ್ಯವಿವಾಹ ತಡೆ ಮತ್ತು ಮಕ್ಕಳ ಹಕ್ಕುಗಳ ರಕ್ಷಣೆಗೆ ಸಂಬಂಧಪಟ್ಟ ಎಲ್ಲ ಇಲಾಖೆಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು. ಜಿಲ್ಲೆಯಲ್ಲಿ ದಾಖಲಾಗಿರುವ ಕಾಣೆ-ಯಾದ ಮತ್ತು ಅಪಹರಣಕ್ಕೊಳಗಾದ ಮಕ್ಕಳ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಅವರನ್ನು ಪತ್ತೆಹಚ್ಚಲು ವಿಶೇಷ ಕಾರ್ಯಪಡೆ ರಚಿಸಿ ತೀವ್ರ ಕ್ರಮ ಕೈಗೊಳ್ಳಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಮರಳಿ ಶಾಲೆಗೆ ದಾಖಲಿಸಲು ಶಿಕ್ಷಣ ಇಲಾಖೆಯೊಂದಿಗೆ ಕೈಜೋಡಿಸುವುದು ಹಾಗೂ ಬೀದಿಗಳಲ್ಲಿ ಮಕ್ಕಳ ಭಿಕ್ಷಾಟನೆಗೆ ಸಂಪೂರ್ಣ ಕಡಿವಾಣ ಹಾಕಿ, ಅಂತಹ ಮಕ್ಕಳನ್ನು ರಕ್ಷಿಸಿ ಪುನರ್ವಸತಿ ಕಲ್ಪಿಸಬೇಕು ಎಂದು ತಿಳಿಸಿದರು.

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಬಾಲ್ಯವಿವಾಹ ತಡೆಗಟ್ಟಲು ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸುವುದು ಮತ್ತು ಬಾಲ್ಯವಿವಾಹ ನಡೆಸುವವರ ವಿರುದ್ಧ ನಿರ್ದಾಕ್ಷಿಣ್ಯ ಕಾನೂನು ಕ್ರಮ ಜರುಗಿಸಬೇಕು. ಮಹಿಳೆ ಮತ್ತು ಮಕ್ಕಳ ರಕ್ಷಣೆಗೆ ರಚಿಸಲಾಗಿರುವ ಅಕ್ಕ ಪಡೆಯು ವಸತಿ ನಿಲಯಗಳು ಹಾಗೂ ಕೊಳಚೆ ಪ್ರದೇಶಗಳಿಗೆ ಭೇಟಿ ನೀಡಿ ಜಾಗೃತಿ ಕಾರ್ಯಕ್ರಮಗಳನ್ನು ಹೆಚ್ಚಿಸಬೇಕು ಎಂದು ಸೂಚಿಸಿದರು.

# ಭಾರತ್ ಜೋಡೋ - ಲಾಂಛನ ಅನಾವರಣ




ಬೆಂಗಳೂರು : ರಾಜ್ಯದ ಯುವಶಕ್ತಿಯನ್ನು ಪ್ರೋತ್ಸಾಹಿಸಲು ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಯೋಜನೆ 'ಭಾರತ್ ಜೋಡೋ' ಕುರಿತು ಕಲಾವಿದರಿಂದ ರೂಪಗೊಂಡ ಲಾಂಛನವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಒಪ್ಪಿರುವ ಲೋಗೊವನ್ನು ಉಪ ಮುಖ್ಯಮಂತ್ರಿ ಡಾ ಜಿ. ಪರಮೇಶ್ವರ್ ಅವರು ಇಂದು ಬಿಡುಗಡೆ ಮಾಡಿದರು. ರಾಜ್ಯದ ಯುವಜನರನ್ನು ಒಂದೆಡೆ ಸೇರಿಸಿ, ಒಗ್ಗಟ್ಟು, ಸಾಮಾಜಿಕ ಸೌಹಾರ್ದತೆ, ಜವಾಬ್ದಾರಿಯುತ ಪೌರತ್ವ ಹಾಗೂ ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಉದ್ದೇಶದಿಂದ ರೂಪುಗೊಂಡ ಒಂದು ಪ್ರಮುಖ ಯೋಜನೆ ಇದಾಗಿದೆ. ಈ ಪ್ರಮುಖ ಯೋಜನೆಗೆ ಒಂದು ವಿಶಿಷ್ಟ ಗುರುತನ್ನು ನೀಡುವ ನಿಟ್ಟಿನಲ್ಲಿ, 'ಭಾರತ್ ಜೋಡೋ' ಲಾಂಛನವನ್ನು ವಿನ್ಯಾಸಗೊಳಿಸಲು ಸಾರ್ವಜನಿಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಇದಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಕರ್ನಾಟಕದಾದ್ಯಂತ ಒಟ್ಟು 255 ಲಾಂಛನ ವಿನ್ಯಾಸಗಳು ಸ್ವೀಕೃತವಾಗಿದ್ದವು. ಸಲ್ಲಿಕೆಯಾದ ವಿನ್ಯಾಸಗಳನ್ನು ಪರಿಶೀಲಿಸಿ, ಆಯ್ಕೆ ಪ್ರಕ್ರಿಯೆಯು ನಿಷ್ಪಕ್ಷಪಾತವಾಗಿ ಹಾಗೂ ವೃತ್ತಿಪರವಾಗಿ ನಡೆಯುವುದನ್ನು ಖಚಿತಪಡಿಸಿಕೊಳ್ಳಲು 'ಕರ್ನಾಟಕ ಚಿತ್ರಕಲಾ ಪರಿಷತ್'ಗೆ ಈ ಜವಾಬ್ದಾರಿಯನ್ನು ವಹಿಸಲಾಗಿತ್ತು.

ವಿವರವಾದ ಮೌಲ್ಯಮಾಪನದ ನಂತರ, ಎರಡು ಲಾಂಛನಗಳನ್ನು ಅಂತಿಮಗೊಳಿಸಿ, ಮಾನ್ಯ ಉಪ ಮುಖ್ಯಮಂತ್ರಿಗಳಾದ ಪರಮೇಶ್ವರ್ ಅವರ ಅಂತಿಮ ಅನುಮೋದನೆಗೆ ಸಲ್ಲಿಸಲಾಯಿತು.

ಇಂದು ಅನಾವರಣಗೊಂಡ ಅಂತಿಮ 'ಭಾರತ್ ಜೋಡೋ' ಲಾಂಛನವು, ಆಯ್ಕೆಯಾದ ಎರಡೂ ವಿನ್ಯಾಸಗಳ ಪ್ರಮುಖ ಅಂಶಗಳು ಮತ್ತು ಆಲೋಚನೆಗಳ ಸೃಜನಶೀಲ ಸಮ್ಮಿಲನವಾಗಿದ್ದು, ಕಾರ್ಯಕ್ರಮಕ್ಕೆ ಅತ್ಯಂತ ಅರ್ಥಪೂರ್ಣ ಹಾಗೂ ವಿಶಿಷ್ಟವಾದ ದೃಶ್ಯ ಗುರುತನ್ನು ಒದಗಿಸಿದೆ.

ಹೊಸ 'ಭಾರತ್ ಜೋಡೋ' ಲಾಂಛನವನ್ನು ಇಂದು ಉಪ ಮುಖ್ಯಮಂತ್ರಿಗಳಾದ ಶ್ರೀ ಪರಮೇಶ್ವರ್ ಅವರು ಅಧಿಕೃತವಾಗಿ ಅನಾವರಣಗೊಳಿಸಿದರು.

ಈ ಯೋಜನೆಯಡಿ ಯುವಕರನ್ನು ಆಕರ್ಷಿಸಲು ಲೋಗೊ ಒಂದು ಒಂದು ಪ್ರಮುಖ ಮೈಲಿಗಲ್ಲಾಗಿದ್ದು, ಕರ್ನಾಟಕದಾದ್ಯಂತ ಯುವಜನರ ಚಟುವಟಿಕೆಗಳಿಗೆ ಒಂದು ವಿಶಿಷ್ಟ ಗೌರವವನ್ನು ತಂದುಕೊಟ್ಟಿದೆ.

ಈ ಲಾಂಛನವು ಒಗ್ಗಟ್ಟು, ಸಹಬಾಳ್ವೆ, ಯುವಜನರ ಭಾಗವಹಿಸುವಿಕೆ ಹಾಗೂ ಕರ್ನಾಟಕದ ಜನರ ಸಾಮೂಹಿಕ ಶಕ್ತಿಯ ಸಂಕೇತವಾಗಿದ್ದು, 'ಭಾರತ್ ಜೋಡೋ' ಕಾರ್ಯಕ್ರಮದ ಮೂಲ ಆಶಯವನ್ನು ಪ್ರತಿಬಿಂಬಿಸುತ್ತದೆ ಎಂದು ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಆಯುಕ್ತರಾದ ಎಮ್.ಎನ್.ಅನುಚೇತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷ್ಣಾಷ್ಟಮಿ ಪೂಜೆಯಲ್ಲಿ ಶಾಸಕ ಪೊನ್ನಣ್ಣ



ಪೊನ್ನಂಪೇಟೆ : ಕೃಷ್ಣ ಜನ್ಮಾಷ್ಟಮಿಯ ಪ್ರಯುಕ್ತ ಇಂದು ಕುಟ್ಟದ ಶ್ರೀಕೃಷ್ಣ ದೇವಸ್ಥಾನದಲ್ಲಿ ನಡೆದ ಕಾರ್ಯಕ್ರಮಕ್ಕೆ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯವರಾದ ಶ್ರೀ ಅಜ್ಜಿಕುಟ್ಟಿರ ಎಸ್ ಪೊನ್ನಣ್ಣ ರವರು, ತಮ್ಮ ಧರ್ಮಪತ್ನಿ ಶ್ರೀಮತಿ ಕಾಂಚನ್ ಪೊನ್ನಣ್ಣ ರವರೊಂದಿಗೆ ಆಗಮಿಸಿದರು. ಕೃಷ್ಣಾಷ್ಟಮಿ ಪ್ರಯುಕ್ತ ಶ್ರೀ ಕ್ಷೇತ್ರದಲ್ಲಿ ನಡೆಯುತ್ತಿರುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಎಲ್ಲರಿಗೂ ಹಬ್ಬದ ಶುಭಾಶಯ ಕೋರಿದ ಮಾನ್ಯ ಶಾಸಕರು, ಅಷ್ಟಮಿಯ ಸಂದೇಶ ಹಾಗೂ ಶುಭ ಗಳಿಗೆ ಎಲ್ಲರಿಗೂ ಒಳ್ಳೆಯದು ಮಾಡಲಿ ಎಂದು ಹಾರೈಸಿದರು.


ಈ ಸಂದರ್ಭದಲ್ಲಿ ಪೊನ್ನಂಪೇಟೆ ಬ್ಲಾಕ್ ಅಧ್ಯಕ್ಷರಾದ ಮಿದೇರಿರ ನವೀನ್, ಕುಟ್ಟ ವಲಯ ಅಧ್ಯಕ್ಷರಾದ ರಾಮಕೃಷ್ಣ, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕಾಳಿಮಾಡ ಪ್ರಶಾಂತ್, ಕುಟ್ಟ ಮಾಜಿ ವಲಯ ಅಧ್ಯಕ್ಷರಾದ ಮುಕಟೀರ ನವೀನ್ ಅಯ್ಯಪ್ಪ, ಶ್ರೀಮಂಗಲ ವಲಯ ಅಧ್ಯಕ್ಷರಾದ ಪಾಲ್ವಿನ್ ಪೂಣಚ್ಚ, ತಿತೀರ ಮಂದಣ್ಣ, ರಾಜನ್, ಸುರೇಶ್, ಶೇಖರ್, ಫಾರ್ದಿನ್, ಹಾಗೂ ಪ್ರಮುಖರು ಉಪಸ್ಥಿತರಿದ್ದರು.

# ರಾಜ್ಯದ ಜನತೆಗೆ ಶೀಘ್ರದಲ್ಲೇ ಬಸ್ ದರ ಏರಿಕೆ ಬರೆ

ಬೆಂಗಳೂರು: ರಾಜ್ಯದ ಜನಸಾಮಾನ್ಯರಿಗೆ ಮತ್ತೊಂದು ಬೆಲೆ ಏರಿಕೆಯ ಬಿಸಿ ತಟ್ಟುವುದು ಬಹುತೇಕ ಪಕ್ಕಾ ಆಗಿದೆ. ರಾಜ್ಯದಲ್ಲಿ ಶೀಘ್ರದಲ್ಲೇ ಸಾರಿಗೆ ಬಸ್ ಟಿಕೆಟ್ ದರ ಪರಿಷ್ಕರಣೆ ಮಾಡುವುದಾಗಿ ಸಾರಿಗೆ ಸಚಿವ ಬೈರತಿ ಸುರೇಶ್‌ಸ್ಪಷ್ಟ ಸುಳಿವು ನೀಡಿದ್ದಾರೆ. ಕಳೆದ ಕೆಲ ತಿಂಗಳುಗಳಿಂದ ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಹಾಗೂ ಇತರೆ ತೈಲೋತ್ಪನ್ನಗಳ ದರವನ್ನು ನಿರಂತರವಾಗಿ ಹೆಚ್ಚಿಸಿದೆ. ತೈಲ ಬೆಲೆ ಏರಿಕೆಯಾಗಿದ್ದರೂ ರಾಜ್ಯ ಸರ್ಕಾರ ಬಸ್ ಪ್ರಯಾಣ ದರವನ್ನು ಹೆಚ್ಚಿಸಿಲ್ಲ. ಇದ-ರಿಂದಾಗಿ ರಾಜ್ಯದ ನಾಲ್ಕೂ ಸಾರಿಗೆ ನಿಗಮಗಳು ಸಾವಿರಾರು ಕೋಟಿ ರೂಪಾಯಿಗಳ ಭಾರಿ ನಷ್ಟ ಅನುಭವಿಸುತ್ತಿವೆ ಎಂದು ತಿಳಿಸಿದ್ದಾರೆ. ದರ ಪರಿಷ್ಕರಣೆಗೆ ಸಂಬಂಧಿಸಿದಂತೆ ನಿವೃತ್ತ ಹಿರಿಯ ಐಎಎಸ್ ಅಧಿಕಾರಿ ಅತುಲ್ ತಿವಾರಿ ಅವರ ನೇತೃತ್ವದ ಸಮಿತಿಯು ಸಮಗ್ರ ಅಧ್ಯಯನ ನಡೆಸುತ್ತಿದ್ದು, ಶೀಘ್ರದಲ್ಲೇ ಸರ್ಕಾರಕ್ಕೆ ಅಂತಿಮ ವರದಿ ಸಲ್ಲಿಸಲಿದೆ. ವರದಿ ಬಂದ ಬಳಿಕ, ರಾಜ್ಯದಲ್ಲಿನ ಪ್ರಸ್ತುತ ಬರ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಜನಸಾಮಾನ್ಯರ ಜೇಬಿಗೆ ಹೆಚ್ಚು ಹೊರೆಯಾಗದಂತೆ ಸ್ವಲ್ಪ ಪ್ರಮಾಣದಲ್ಲಿ ದರ ಹೆಚ್ಚಳ ಮಾಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.



# ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಪ್ರಗತಿ ಪರಿಶೀಲನಾ ಸಭೆ



ವಿರಾಜಪೇಟೆ : ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತು ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳು ಹಾಗೂ ವಿರಾಜಪೇಟೆ ವಿಧಾನ ಸಭಾ ಕ್ಷೇತ್ರದ ಕ್ಷೇತ್ರದ ಶಾಸಕರಾದ ಶ್ರೀ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಅವರು ಇಂದು ಬೆಂಗಳೂರಿನ ವಿಕಾಸಸೌಧದ ಕೊಠಡಿ ಸಂ-ಖ್ಯೆ 222ರಲ್ಲಿ ಇಲಾಖೆಯ ಅಧಿಕಾರಿಗಳು ಹಾಗೂ ಗುತ್ತಿಗೆದಾರರೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಂಡಿರುವ ರಸ್ತೆ ಹಾಗೂ ಸೇತುವೆ ಅಭಿವೃದ್ಧಿ ಕಾಮಗಾರಿಗಳ ವಿಳಂಬ ಹಾಗೂ ಕೆಲವು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಅಧಿಕಾರಿಗಳು ಈ ಕುರಿತು ಕಟ್ಟುನಿಟ್ಟಿನ ಕ್ರಮ ಕೈಗೊಂಡು, ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಗುಣಮಟ್ಟದೊಂದಿಗೆ ಶೀಘ್ರವಾಗಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಕಾವೇರಿ ನೀರಾವರಿ ನಿಗಮ ವತಿಯಿಂದ ಕೈಗೊಂಡಿರುವ ಕಾವೇರಿ ನದಿ ಸ್ವಚ್ಛತೆ ಹಾಗೂ ಪುನರ್ವಸತಿ ಕಾಮಗಾರಿಗಳ ಪ್ರಗತಿಯ ಕುರಿತು ಪರಿಶೀಲನೆ ನಡೆಸಿ, ಬಾಕಿ ಇರುವ ಕಾಮಗಾರಿಗಳನ್ನು ಯಾವುದೇ ವಿಳಂಬವಿಲ್ಲದೆ ಶೀಘ್ರವಾಗಿ ಪೂರ್ಣಗೊಳಿಸುವಂತೆ ನಿಗಮದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಆರ್.ಡಿ.ಪಿ.ಆರ್. ಇಲಾಖೆ ವ್ಯಾಪ್ತಿಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳ ರಸ್ತೆ ಅಭಿವೃದ್ಧಿ ಹಾಗೂ ನಿವೇಶನ ಹಂಚಿಕೆ ಬಗ್ಗೆ ಹಾಗೂ ಕಾಲೋನಿಗಳ ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮಗಳನ್ನು ಕೂಡಲೇ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕ್ಷೇತ್ರದ ಜನರಿಗೆ ಅಗತ್ಯವಿರುವ ಮೂಲಸೌಕರ್ಯ ಕಾಮಗಾರಿಗಳನ್ನು ಯಾವುದೇ ಕಾರಣಕ್ಕೂ ವಿಳಂಬ ಮಾಡದೆ, ಗುಣಮಟ್ಟ ಹಾಗೂ ಪಾರದರ್ಶಕತೆಗೆ ಆದ್ಯತೆ ನೀಡಿ ಶೀಘ್ರವಾಗಿ ಪೂರ್ಣಗೊಳಿಸಬೇಕು ಎಂದು ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.


ಈ ಸಭೆಯಲ್ಲಿ ಕೊಡಗು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ತಿತೀರ ಧರ್ಮಜ ಉತ್ತಪ್ಪ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಬಾನಂಡ ಪ್ರತ್ಯು ರವರು ಉಪಸ್ಥಿತರಿದ್ದರು.

# ಜಿಲ್ಲೆಯ ರಜನಿ ಲಕ್ಕಗೆ 5 ಚಿನ್ನದ ಪದಕ



ಬಳ್ಳಾರಿ : ಬೆಂಗಳೂರಿನ ವಿಜಯನಗರದಲ್ಲಿ ಕರ್ನಾಟಕ ಈಜು ಸಂಸ್ಥೆಯ ವತಿಯಿಂದ ಆ.29 ಮತ್ತು 30ರಂದು ಆಯೋಜಿಸಿದ್ದ 27ನೇ ರಾಜ್ಯ ಮಾಸ್ಟರ್ಸ್ ಈಜು ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಜಿಲ್ಲೆಯ ಈಜುಪಟು ರಜನಿ ಲಕ್ಕ ಅವರು 5 ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ. 65 ರಿಂದ 69 ವರ್ಷದೊಳಗಿನ ಹಿರಿಯರ ವಿಭಾಗದಲ್ಲಿ ಸ್ಪರ್ಧಿಸಿದ್ದ ರಜನಿ ಲಕ್ಕ ಅವರು 200 ಮೀ. ಐ.ಎಂ., 100 ಮೀ. ಬಟರ್ ಫ್ಲೈ, 100 ಮೀ. ಬ್ರೆಸ್ಟ್ ಸ್ಟ್ರೋಕ್, 50 ಮೀ. ಬ್ರೆಸ್ಟ್ ಸ್ಟ್ರೋಕ್, 50 ಮೀ. ರಿಲೇಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಜಿಲ್ಲೆಗೆ ಕೀರ್ತಿ ತಂದ ರಜನಿ ಲಕ್ಕ ಅವರ ಸಾಧನೆಗೆ ಶಾಸಕರಾದ ಬಿ.ನಾಗೇಂದ್ರ, ನಾರಾ ಭರತರೆಡ್ಡಿ, ಡಿಸಿ ಕೆ.ನಾಗೇಂದ್ರ ಪ್ರಸಾದ್, ಎಸ್ಪಿ ಡಾ.ಸುಮನ್ ಡಿ. ಪನ್ನೇಕರ್ ಹರ್ಷ ವ್ಯಕ್ತಪಡಿಸಿದ್ದಾರೆ.

# ಇಂದು ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್. ಕಿರಣ್ ಕುಮಾರ್ ಬಳ್ಳಾರಿಗೆ



ಬಳ್ಳಾರಿ : ಬಾಹ್ಯಾಕಾಶ ಆಯೋಗದ ಸದಸ್ಯರು ಹಾಗೂ ಇಸ್ರೋ ಮಾಜಿ ಅಧ್ಯಕ್ಷರಾದ ಎ.ಎಸ್. ಕಿರಣ್ ಕುಮಾರ್ ಅವರು ಸೆಪ್ಟೆಂಬರ್ 5 ರಂದು ಬಳ್ಳಾರಿಗೆ ಆಗಮಿಸಲಿದ್ದಾರೆ. ನಗರದ ಕಂಟೋನ್ಮೆಂಟ್‌ನಲ್ಲಿರುವ ಎಸ್.ಕೆ. ಮೋದಿ ನ್ಯಾಷನಲ್ ಶಾಲೆಯಲ್ಲಿ ಬೆಳಗ್ಗೆ 10 ಗಂಟೆಗೆ ಆಯೋಜಿಸಲಾಗಿರುವ 'ವಾರ್ಷಿಕ ವಿಜ್ಞಾನ ವಸ್ತುಪ್ರದರ್ಶನ 2026' ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ ಸಂಜೆ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.